**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ ಸಿ ಸಂಃ 1196/2021**

| | | |
|---|---|---|
| ಸಾಕ್ಷಿಯ ಹೆಸರುಃ | ಚಂದ್ರಶೇಖರ | ಫ್ರಾಸಾಃಃ 5 |
| ತಂದೆಯ ಹೆಸರುಃ | ಸಂಜೀವೇಗೌಡ | ಚಾಸಾಃಃ 8 |
| ವಯಸ್ಸುಃ | 38 ವರ್ಷ | ಪ್ರಮಾಣೀಕರಿಸಿದ<br>ದಿಃ 01/12/2025 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಚಪ್ಪರದಹಳ್ಳಿ ಗ್ರಾಮ,<br>ಪಿರಿಯಾಪಟ್ಟಣ ತಾಲ್ಲೂಕು. | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ಆರೋಪಿತ ನಮ್ಮ ಊರಿನವರು. ಚಾಸಾ-9 ಗೊತ್ತು. ಸಾಕ್ಷಿಯು ಮಹಜರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.7** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.7(ಎ)** ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 3 ವರುಷಗಳ ಹಿಂದೆ ಪೋಲೀಸರು ನಮ್ಮ ಊರಿಗೆ ಬಂದಾಗ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಪಡೆದರು ಎಂದು ಗೊತ್ತಿಲ್ಲ. ನಿಪಿ-7 ರಲ್ಲಿ ಬರೆದಿರುವ ಸಂಗತಿಗಳು ಗೊತಿಲ್ಲ. ಸಾಕ್ಷಿಯು ಅಮಾನತ್ತು ಮಹಜರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.8** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.8(ಎ)** ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 3 ವರುಷಗಳ ಹಿಂದೆ ಪೋಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಪಡೆದರು ಎಂದು ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಿಪಿ-8 ರಲ್ಲಿ ಬರೆದಿರುವ ಸಂಗತಿಗಳು ಗೊತ್ತಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 05.04.2020 ರಂದು ಪೋಲೀಸರು ಈ ಪ್ರಕರಣದಲ್ಲಿ ಕಳ್ಳತನ ಮಾಡಿದ ಆರೋಪಿತನನ್ನು ವಶಕ್ಕೆ ಪಡೆದಿದ್ದು, ನನ್ನನ್ನು ಮತ್ತು ಚಾಸ-9 ರವರನ್ನು ಠಾಣೆಗೆ ಕರೆಸಿ ಪ್ರಕಾರಣ ವಿಷಯವನ್ನು ತಿಳಿಸಿ, ಆರೋಪಿಯೊಂದಿಗೆ ಆರೋಪಿತ ಕಳ್ಳತನ ಮಾಡಿದ ಸ್ಥಳಕ್ಕೆ ಬೇಟಿ ನೀಡಿ ಆರೋಪಿತ ತೋರಿಸಿದ ಸ್ಥಳದಲ್ಲಿ ಬೆಳಿಗ್ಗೆ 11.00 ರಿಂದ 11.50 ರವರಗೆ ಸ್ಥಳ ಪಂಚನಾಮೆ ಮಾಡಿ ಸ್ಥಳದಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ದಿನ ಠಾಣೆಗೆ ವಾಪಸ್ಸಾಗಿ ಆರೋಪಿತ ಹಾಜರುಪಡಿಸಿದ 500 ರೂಾಗಳ 61 ನೋಟುಗಳು ಒಟ್ಟು ರೂ. 30500/-, ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಯ 90 ಎಂ ಎಲ್ ನ 112 ಟೆಟ್ರಾ ಪ್ಯಾಕೇಟ್ ಗಳನ್ನು, ಸಿಸಿ ಟಿವಿ ಕ್ಯಾಮೆರಾದ ಡಿ ವಿ ಆರ್ ಜೊತೆಗೆ ಅಡಾಪ್ಟರ್ ವೈರ್, 650 ಎಂ ಎಲ್ ನ ಟ್ಯೂಬೋರಗ ಸ್ಟ್ರಾಂಗ್ 4 ಖಾಲಿ ಬಾಟಲಿಗಳು, 330 ಎಂ ಎಲ್ ನ ಕೆಎಫ್ ಸ್ಟ್ರಾಂಗ್ 6 ಖಾಲಿ ಟಿನ್ನುಗಳು, ಸುಮಾರು 4 ಅಡಿ ಉದ್ದದ ಒಂದು ಕಬ್ಬಿಣದ ಹಾರೆ ಮತ್ತು 2 ಪ್ಲಾಸ್ಟಿಕ್ ಚೀಲಗಳನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**
**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**1 ನೇ ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**